# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೆರಡನೆಯ ಅಧಿವೇಶನ

## <u>ಕಾರ್ಯಕಲಾಪಗಳ ಪಟ್ಟಿ</u>

**ಮಂಗಳವಾರ, ದಿನಾಂಕ:13ನೇ ಫೆಬ್ರವರಿ, 2024**
**(ಸಮಯ: ಬೆಳಗ್ಗೆ 10.30 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

## 02. ಕಾರ್ಯದರ್ಶಿಯವರ ವರದಿ

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಸಭೆಯಲ್ಲಿ ಮಂಡಿಸುವುದು.

## 03. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಒಂದನೇ ಮತ್ತು ಎರಡನೇ ಪಟ್ಟಿಯ ರೀತ್ಯಾ.

## 04. ಗಮನ ಸೆಳೆಯುವ ಸೂಚನೆಗಳು

01. **ಡಾ: ತಳವಾರ್ ಸಾಬಣ್ಣ** ಅವರು ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಅಧ್ಯಯನ ಪೀಠಗಳಲ್ಲಿ ಪ್ರಸ್ತುತವಿರುವ ಶೈಕ್ಷಣಿಕ ಸ್ಥಿತಿ, ಕಾರ್ಯವೈಖರಿ, ಹಣಕಾಸಿನ ವ್ಯವಸ್ಥೆ, ಸಮಾಜಕ್ಕೆ ಮತ್ತು ಶೈಕ್ಷಣಿಕ ಕ್ಷೇತ್ರಕ್ಕೆ ನೀಡಿದ ಕೊಡುಗೆ ಹಾಗೂ ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

..2..

೦2. **ಶ್ರೀ ಯು.ಬಿ. ವೆಂಕಟೇಶ್** ಅವರು ಉಡುಪಿ ಜಿಲ್ಲೆ ಕಾರ್ಕಳ ತಾಲ್ಲೂಕಿನ ಎರ್ಲಪಾಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬೈಲೂರು ಉಮಿಕಲ್ ಬೆಟ್ಟದಲ್ಲಿ ನಿರ್ಮಿಸಲಾದ ದೋಷಪೂರಿತ ಪರಶುರಾಮ ವಿಗ್ರಹ ಅವಶೇಷಗಳನ್ನು ತೆರವುಗೊಳಿಸಿ ಸಮುದ್ರಕ್ಕೆ ಎಸೆದಿರುವ ಪ್ರಕರಣದ ಕುರಿತು ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

೦3. **ಶ್ರೀ ಕೆ. ಹರೀಶ್ ಕುಮಾರ್** ಅವರು ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಲ್ಲಿ ರೈತರು ಹಾಗೂ ಬೆಳೆಗಾರರಿಗೆ ತರಬೇತಿ ನೀಡುವ ಸಲುವಾಗಿ ಬೆಳ್ತಂಗಡಿ ತಾಲ್ಲೂಕಿನಲ್ಲಿ ಸ್ಥಾಪಿಸಲಾದ ಕೃಷಿ ರೈತ ತರಬೇತಿ ಕೇಂದ್ರವು ಮೂಲಸೌಲಭ್ಯಗಳ ಕೊರತೆಯಿಂದಾಗಿ ನಿಷ್ಕ್ರಿಯೆಗೊಂಡಿರುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

೦4. **ಶ್ರೀ ಅ. ದೇವೇಗೌಡ** ಅವರು ರಾಜ್ಯದಲ್ಲಿರುವ ಕಾಲೇಜು ಶಿಕ್ಷಣ ಇಲಾಖೆಯಡಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸೇವೆಯನ್ನು ಖಾಯಂಗೊಳಿಸುವ ಬಗ್ಗೆ ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖಾ ಸಚಿವರ ಗಮನ ಸೆಳೆಯುವುದು.

೦5. **ಶ್ರೀ ಗೋವಿಂದರಾಜು** ಅವರು ಕೋಲಾರ ನಗರದಲ್ಲಿರುವ ದೇವರಾಜ್ ಅರಸು ಎಜುಕೇಶನ್ ಟ್ರಸ್ಟ್‌ನಿಂದ ನಡೆಯುತ್ತಿರುವ ಆರ್.ಎಲ್. ಜಾಲಪ್ಪ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯು ಕಳೆದ 2002ನೇ ಸಾಲಿನಿಂದ ಇಲ್ಲಿಯವರೆಗೆ ಆಸ್ತಿ ತೆರಿಗೆಯನ್ನು ಪೂರ್ಣ ಪ್ರಮಾಣದಲ್ಲಿ ಪಾವತಿಸದಿರುವ ಬಗ್ಗೆ ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರ ಗಮನ ಸೆಳೆಯುವುದು.

## 05. ನಿಯಮ 330ರ ಮೇರೆಗೆ

೦1. **ಶ್ರೀ ತಿಪ್ಪಣ್ಣಪ್ಪ ಕಮಕನೂರ** ಅವರು ಕಲಬುರಗಿಯಲ್ಲಿ ನಿರಂತರ ನೀರು ಸರಬರಾಜು ಯೋಜನೆಯಡಿ ಅಳವಡಿಸಿರುವ ಪೈಪ್‌ಗಳು ಅತ್ಯಂತ ಕಳಪೆ ಗುಣಮಟ್ಟದಿಂದ ಕೂಡಿದ್ದು, ಇದುವರೆವಿಗೂ ಈ ಯೋಜನೆಯಡಿಯಲ್ಲಿ ಸಾರ್ವಜನಿಕರಿಗೆ ನೀರಿನ ಸಂಪರ್ಕ ಕಲ್ಪಿಸದಿರುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀ ಎಸ್. ರವಿ** ಅವರು ರಾಮನಗರ ಜಿಲ್ಲೆಯ ವ್ಯಾಪ್ತಿಗೆ ಒಳಪಡುವ ರಾಮನಗರ ಪ್ರಾದೇಶಿಕ ವಿಭಾಗ, ಕಾವೇರಿ ವನ್ಯಜೀವಿ ವಿಭಾಗ, ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನ ವಿಭಾಗಗಳಲ್ಲಿ ಕಾಡಾನೆಗಳ ದಾಳಿಯಿಂದಾಗಿ ಜೀವಹಾನಿ ಹಾಗೂ ರೈತರ ಬೆಳೆಗಳಿಗೆ ಅಪಾರ ನಷ್ಟ ಉಂಟಾಗಿರುವ ಕುರಿತು ಪ್ರಸ್ತಾಪಿಸುವುದು.

..3..

೦೩. **ಶ್ರೀಯುತರುಗಳಾದ ಮರಿತಿಬ್ಬೇಗೌಡ, ಮಧು ಜಿ. ಮಾದೇಗೌಡ ಹಾಗೂ ಎಸ್.ಎಲ್. ಭೋಜೇಗೌಡ** ಅವರುಗಳು ಪ್ರಾಥಮಿಕ ಶಾಲೆಯಿಂದ ಪ್ರೌಢ ಶಾಲೆಗೆ, ಪ್ರೌಢ ಶಾಲೆಯಿಂದ ಪದವಿ ಪೂರ್ವ ಕಾಲೇಜುಗಳಿಗೆ ಬಡ್ತಿ ಪಡೆದ ಶಿಕ್ಷಕರು ಹಾಗೂ ಉಪನ್ಯಾಸಕರಿಗೆ 6ನೇ ವೇತನ ಆಯೋಗದ ವರದಿ ಅನ್ವಯ ಬಡ್ತಿ ಪಡೆಯದಿರುವವರಿಗೆ 15, 20, 25 ವರ್ಷಗಳ ಕಾಲಮಿತಿ ಬಡ್ತಿ, 20, 25 ವರ್ಷಗಳ ಸ್ವಯಂಚಾಲಿತ ವೇತನ ಬಡ್ತಿಗಳನ್ನು ಮಂಜೂರು ಮಾಡದಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆಯ ಕುರಿತು ಪ್ರಸ್ತಾಪಿಸುವುದು.

## 06. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

ಅ) **"**2024ನೇ ಫೆಬ್ರವರಿ, 12ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ**"** ಎಂದು **ಶ್ರೀ ಯು.ಬಿ. ವೆಂಕಟೇಶ್** ಅವರು ಸೂಚಿಸುವುದು;

ಆ) **ಶ್ರೀಮತಿ ಉಮಾಶ್ರೀ** ಅವರು ಅನುಮೋದಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**